## ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:-** ಶ್ರೀ ಎಸ್.ಪ್ರಭಾಕರ, ಸಹಾಯಕ ಕಾರ್ಯಪಾಲಕ ಇಂಜಿನಿಯರ್ (ಜಿಲ್ಲಾ ಪಂಚಾಯತ್ ಸೇವೆ), ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪ ವಿಭಾಗ, ರಾಣೆಬೆನ್ನೂರು ಇವರನ್ನು ಅಮಾನತ್ತುಗೊಳಿಸುವ ಬಗ್ಗೆ - ಆದೇಶ.

**ಓದಲಾಗಿದೆ:-** ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಹಾವೇರಿ ಇವರ ಪತ್ರ ಸಂಖ್ಯೆ. ಹಾಜಿಪಂ/ಆ-5/ಸಿಬ್ಬಂದಿ/ಇವಿ/ ವಹಿ-22/2013-14/235 ದಿನಾಂಕ. 30-04-2013.

**ಪ್ರಸ್ತಾವನೆ:**

ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಹಾವೇರಿ ರವರು ಮೇಲೆ ಓದಲಾದ ಪತ್ರದಲ್ಲಿ ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪ ವಿಭಾಗ, ರಾಣೇಬೆನ್ನೂರು ಇಲ್ಲಿ ಸಹಾಯಕ ಕಾರ್ಯಪಾಲಕ ಇಂಜಿನಿಯರ್‌ರಾಗಿ ಕಾರ್ಯನಿರ್ವಹಿಸುತ್ತಿರುವ ಶ್ರೀ ಎಸ್.ಪ್ರಭಾಕರ (ಜಿಲ್ಲಾ ಪಂಚಾಯತ್ ಸೇವೆ) ರವರು ದಿನಾಂಕ 24-04-2013ರಂದು ಲಂಚ ಪಡೆಯುತ್ತಿದ್ದಾಗ ಲೋಕಾಯುಕ್ತರಿಂದ ಟ್ರ್ಯಾಪ್ ಆಗಿದ್ದು, ಸದರಿ ಅಧಿಕಾರಿಯನ್ನು ನ್ಯಾಯಾಲಯದ ಮುಂದೆ ಹಾಜರುಪಡಿಸಿ, ವಿಶೇಷ ನ್ಯಾಯಾಲಯವು ದಿನಾಂಕ 7-5-2013ರವರೆಗೆ ನ್ಯಾಯಾಂಗ ಬಂಧನದಲ್ಲಿರಿಸಲಾಗಿದ್ದು, ಈ ಬಗ್ಗೆ ಪೋಲೀಸ್ ನಿರೀಕ್ಷಕರು, ಕರ್ನಾಟಕ ಲೋಕಾಯುಕ್ತ, ಹಾವೇರಿ ರವರು ಸಲ್ಲಿಸಿರುವ ವರದಿಯನ್ನು ಮುಂದಿನ ಕ್ರಮಕ್ಕಾಗಿ ಸರ್ಕಾರಕ್ಕೆ ಸಲ್ಲಿಸಿರುತ್ತಾರೆ.

ಪೋಲೀಸ್ ನಿರೀಕ್ಷಕರು, ಕರ್ನಾಟಕ ಲೋಕಾಯುಕ್ತ, ಪೋಲೀಸ್ ವಿಭಾಗ, ಹಾವೇರಿ ರವರು ಅಪರ ಪೋಲೀಸ್ ಮಹಾನಿರ್ದೇಶಕರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು ರವರಿಗೆ ದಿನಾಂಕ 24-04-2013ರಂದು ಸಲ್ಲಿಸಿರುವ ಫ್ಯಾಕ್ಸ್ ಸಂದೇಶದಲ್ಲಿ ಶ್ರೀ ಮಲ್ಲಯ್ಯ ವಿರೂಪಾಕ್ಷಯ್ಯ ಕಿತ್ತೂರು ಮಠ, ರಾಣೇಬೆನ್ನೂರು ಇವರು ಲೋಕಾಯುಕ್ತ ಕಚೇರಿಗೆ ಸಲ್ಲಿಸಿರುವ ದೂರಿನಲ್ಲಿ ಅವರು ರಾಣೇಬೆನ್ನೂರಿನಲ್ಲಿರುವ ಖಾಸಗಿ ಮತ್ತು ಸರ್ಕಾರದ ಬೋರ್‌ವೆಲ್‌ಗಳನ್ನು ಕೊರೆಸುವ ಕೆಲಸ ನಿರ್ವಹಿಸುತ್ತಿದ್ದು, ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪ ವಿಭಾಗ, ರಾಣೇಬೆನ್ನೂರು ತಾಲ್ಲೂಕಿನ ಗ್ರಾಮಗಳಲ್ಲಿ ಬರಪರಿಹಾರ ಯೋಜನೆಯಡಿಯಲ್ಲಿ ಕೊಳವೆ ಬಾವಿಗಳನ್ನು ಕೊರೆಸಲು ಸದರಿ ಉಪ ವಿಭಾಗದ ಶ್ರೀ ಎಸ್.ಪ್ರಭಾಕರ, ಸ.ಕಾ.ಇಂ. ರವರು ಪ್ರತಿ ಬೋರ್‌ವೆಲ್‌ಗೆ ರೂ. 2,000/- ಗಳಂತೆ ಲಂಚ ನೀಡುವಂತೆ ಒತ್ತಾಯಿಸಿದ್ದು, ಅವರು ಈಗಾಗಲೇ ಕೊರೆಸಿದ ಒಟ್ಟು 60 ಬೋರ್‌ವೆಲ್‌ಗಳ ಬಾಬ್ತು ಪ್ರತಿ ಬೋರ್‌ವೆಲ್‌ಗೆ ರೂ. 2,000/- ಗಳಂತೆ ಒಟ್ಟು ರೂ. 1,20,000/- ಗಳಾಗುತ್ತಿದ್ದು, ಅವರ ಒತ್ತಾಯದಂತೆ ಇಲ್ಲಿಯತನಕ ರೂ. 74,000/- ಗಳನ್ನು ಸದರಿ ಅಧಿಕಾರಿಗೆ ನೀಡಿದ್ದು, ಇನ್ನು ಉಳಿದ 30 ಬೋರ್‌ವೆಲ್‌ಗಳನ್ನು ಕೊರೆಸಿದ ಕಾಮಗಾರಿಗಳ ಬಿಲ್‌ಗಳನ್ನು ಮಾಡಿಕೊಡುವಂತೆ ದಿನಾಂಕ 20-04-2013ರಂದು ಸಾಯಂಕಾಲ ಸದರಿ ಅಧಿಕಾರಿಯ ಕಚೇರಿಗೆ ಹೋಗಿ ಕೇಳಿಕೊಂಡಾಗ ಅವರು ಉಳಿದ ಇನ್ನು ರೂ. 46,000/-ಗಳ ಲಂಚವನ್ನು ನೀಡುವಂತೆ ಒತ್ತಾಯಿಸಿರುತ್ತಾರೆಂದು, ಫಿರ್ಯಾದುದಾರರು ಲಂಚ ನೀಡಲು ಇಷ್ಟವಿಲ್ಲದ್ದರಿಂದ ಕರ್ನಾಟಕ ಲೋಕಾಯುಕ್ತ ಕಚೇರಿಗೆ ದೂರು ನೀಡಿದ್ದರ ಮೇರೆಗೆ ಲೋಕಾಯುಕ್ತ ಕಚೇರಿಯವರು ದಿನಾಂಕ 24-04-2013ರಂದು ಫಿರ್ಯಾದುದಾರರ ಸಮಕ್ಷಮ ಶ್ರೀ ಎಸ್.ಪ್ರಭಾಕರ, ಸಹಾಯಕ ಕಾರ್ಯಪಾಲಕ ಇಂಜಿನಿಯರ್ (ಜಿ.ಪಂ.ಸೇವೆ), ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪ ವಿಭಾಗ, ರಾಣೆಬೆನ್ನೂರು ರವರನ್ನು ಟ್ರ್ಯಾಪ್ ಮಾಡಿ, ದಿನಾಂಕ 7-5-2013 ರವರೆಗೆ ನ್ಯಾಯಾಂಗ ಬಂಧನದಲ್ಲಿ ಇರಿಸಲಾಗಿದೆಯೆಂದು ವರದಿ ಮಾಡಿರುತ್ತಾರೆ.

----2

ಪೋಲೀಸ್ ನಿರೀಕ್ಷಕರು, ಕರ್ನಾಟಕ ಲೋಕಾಯುಕ್ತ, ಪೋಲೀಸ್ ವಿಭಾಗ, ಹಾವೇರಿ ರವರ ವರದಿಯನ್ವಯ ಶ್ರೀ ಎಸ್.ಪ್ರಭಾಕರ, ಸಹಾಯಕ ಕಾರ್ಯಪಾಲಕ ಇಂಜಿನಿಯರ್ (ಜಿಲ್ಲಾ ಪಂಚಾಯತ್ ಸೇವೆ), ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪ ವಿಭಾಗ, ರಾಣೆಬೆನ್ನೂರು ರವರು ಸರ್ಕಾರಿ ಕೆಲಸವನ್ನು ನಿರ್ವಹಿಸಲು ಫಿರ್ಯಾದುದಾರರಿಂದ ಅಕ್ರಮ ಸಂಭಾವನೆಯನ್ನು ಬಯಸಿರುವುದು ಮೇಲ್ನೋಟಕ್ಕೆ ಕಂಡುಬಂದಿರುವುದರಿಂದ ಅವರ ವಿರುದ್ಧದ ಇಲಾಖಾ ವಿಚಾರಣೆಯನ್ನು ಬಾಕಿಯಿರಿಸಿ ಅಮಾನತ್ತುಗೊಳಿಸಲು ಸರ್ಕಾರವು ನಿರ್ಧರಿಸಿ ಈ ಕೆಳಕಂಡಂತೆ ಆದೇಶಿಸಿದೆ.

**ಆದೇಶ ಸಂಖ್ಯೆ. ಗ್ರಾಅಪ 8 ಇಎನ್‌ಕ್ಯೂ 2013, ಬೆಂಗಳೂರು,**
**ದಿನಾಂಕ 14-06-2013**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಶ್ರೀ ಎಸ್.ಪ್ರಭಾಕರ, ಸಹಾಯಕ ಕಾರ್ಯಪಾಲಕ ಇಂಜಿನಿಯರ್ (ಜಿಲ್ಲಾ ಪಂಚಾಯತ್ ಸೇವೆ), ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪ ವಿಭಾಗ, ರಾಣೆಬೆನ್ನೂರು ಇವರನ್ನು ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಗಳು 1957ರ ನಿಯಮ 10(2)(ಎ) ರನ್ವಯ ಅವರ ವಿರುದ್ಧದ ಲೋಕಾಯುಕ್ತ ಇಲಾಖಾ ವಿಚಾರಣೆಯನ್ನು ಕಾಯ್ದಿರಿಸಿ ದಿನಾಂಕ 24-04-2013 ರಿಂದ ಪೂರ್ವಾನ್ವಯವಾಗಿ ಜಾರಿಗೆ ಬರುವಂತೆ, ಅಮಾನತ್ತುಗೊಳಿಸಿದೆ ಹಾಗೂ ಇವರ ಹುದ್ದೆಯ ಸ್ಥಾನ (ಲೀನ್) ವನ್ನು ಮುಖ್ಯ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆ, ಬೆಂಗಳೂರು ರವರ ಕಚೇರಿಗೆ ವರ್ಗಾಯಿಸಿ ಆದೇಶಿಸಿದೆ.

ಅಮಾನತ್ತಿನ ಅವಧಿಯಲ್ಲಿ ಈ ಅಧಿಕಾರಿಯು ಸಕ್ಷಮ ಪ್ರಾಧಿಕಾರದ ಅನುಮತಿ ಇಲ್ಲದೇ ಕೇಂದ್ರ ಸ್ಥಾನವನ್ನು ಬಿಡತಕ್ಕದ್ದಲ್ಲ ಹಾಗೂ ಕರ್ನಾಟಕ ನಾಗರೀಕ ಸೇವಾ ನಿಯಮಗಳು ನಿಯಮ 98ರ ಅನುಸಾರ ಜೀವನಾಧಾರ ಭತ್ಯೆಗೆ ಅವರು ಅರ್ಹರಿರುತ್ತಾರೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಹೆಚ್.ಸಿ.ರಾಜಪ್ಪ),
ಸರ್ಕಾರದ ಅಧೀನ ಕಾರ್ಯದರ್ಶಿ(ಸೇವೆಗಳು-ಎ),
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

ಪ್ರತಿ:

1. ಮಹಾಲೇಖಪಾಲರು, (ಅ ಮತ್ತು ಇ) ಕರ್ನಾಟಕ, ಬೆಂಗಳೂರು.
2. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಹಾವೇರಿ.
3. ಮುಖ್ಯ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆ, ಬೆಂಗಳೂರು.
4. ಮುಖ್ಯ ಇಂಜಿನಿಯರ್, ಸಂಪರ್ಕ ಮತ್ತು ಕಟ್ಟಡ (ದಕ್ಷಿಣ), ಕೆ.ಆರ್.ಸರ್ಕಲ್, ಬೆಂಗಳೂರು.
5. ಶ್ರೀ ಎಸ್.ಪ್ರಭಾಕರ, ಸಹಾಯಕ ಕಾರ್ಯಪಾಲಕ ಇಂಜಿನಿಯರ್ (ಜಿ.ಪಂ.ಸೇವೆ), ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪ ವಿಭಾಗ, ರಾಣೆಬೆನ್ನೂರು.
6. ಶ್ರೀ ಎಸ್.ಪ್ರಭಾಕರ ತಂದೆ ಎಸ್.ಗಂಗಪ್ಪ, ಸಾ: ತಳಕಲ್, ತಾ: ಹೂವಿನಹಡಗಲಿ ಜಿಲ್ಲೆ: ಬಳ್ಳಾರಿ.
7. ಮಾನ್ಯ ಗ್ರಾ..ಅ.ಪಂ.ರಾಜ್ ಸಚಿವರ ಆಪ್ತ ಕಾರ್ಯದರ್ಶಿಯವರಿಗೆ.
8. ಗ್ರಾ.ಅ.ಪಂ.ರಾಜ್ ಇಲಾಖೆಯ ಪ್ರಧಾನ ಕಾರ್ಯದರ್ಶಿ / ಕಾರ್ಯದರ್ಶಿ (ಪಂ.ರಾಜ್)/ ಅಪರ ಕಾರ್ಯದರ್ಶಿ ಇವರ ಆಪ್ತ ಕಾರ್ಯದರ್ಶಿ/ ಆಪ್ತ ಸಹಾಯಕರಿಗೆ.
9. ಮಾಹಿತಿ ಕೇಂದ್ರ : ಹೆಚ್ಚುವರಿ ಪ್ರತಿ:ರಕ್ಷಾ ಕಡತ : ಕಂಪ್ಯೂಟರ್ ಸೆಲ್.